**ಪ್ರಧಾನ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ**

**ಸಿ.ಸಿ. ನಂ. 3201/2021**

| | | | |
|---|---|---|---|
| **ಹೆಸರು** | **:** | **ಶಿವಕುಮಾರ** | **ಚಾ.ಸಾ. 4** |
| **ತಂದೆಯ ಹೆಸರು** | **:** | **ಬಕ್ಕಪ್ಪ** | **ಪ್ರಾ.ಸಾ. 3** |
| **ವಯಸ್ಸು** | **:** | **25 ವರ್ಷ** | **ದಿನಾಂಕಃ 04-07-2026** |
| **ಉದ್ಯೋಗ** | **:** | **ಕೂಲಿ ಕೆಲಸ** | |
| **ವಾಸಸ್ಥಳ** | **:** | **ಗರಗಪಳ್ಳಿ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ನನಗೆ ಆರೋಪಿತರ ಪರಿಚಯವಿಲ್ಲ. ನಾನು ಪೋಲಿಸರಿಗೆ ಹೇಳಿಕೆ ಕೊಟ್ಟಿಲ್ಲ.

(ಈ ಹಂತದಲ್ಲಿ ತನಿಖಾಧಿಕಾರಿಯವರ ಮುಂದೆ ಸಲ್ಲಿಸಿರುವ ದೂರು ಮತ್ತು ಪಂಚನಾಮೆಗೆ ಈ ಸಾಕ್ಷಿ ಭಾಗಶಃ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ದಿನಾಂಕ 24-06-2020ರಂದು ನಾನು ಫ್ಯಾಕ್ಟರಿಯಲ್ಲಿದ್ದಾಗ ಬೆಳಗ್ಗೆ 8.30 ಗಂಟೆಗೆ ಆರೋಪಿತರೆಲ್ಲರೂ ತಮ್ಮದು ಜಮೀನಿಗೆ ಅದನ್ನು ತಾವು ಸಾಗುವಳಿ ಮಾಡುತ್ತೇವೆ ಅಂತ ಅನ್ನುತ್ತ ಸುಗರ ಫ್ಯಾಕ್ಟರಿ ಗೇಟನಿಂದ ಒಳಗೆ ನುಗ್ಗಲು ಪ್ರಯತ್ನಿಸಿದಾಗ ನಾನು ಅವರಿಗೆ ತಡೆದರೂ ಕೂಡ ಅವರು ಕೇಳದೇ ಜಬರದಸ್ತಿಯಿಂದ ಫ್ಯಾಕ್ಟರಿಯ ಆವರಣದ ಒಳಗಡೆ ಅತಿಕ್ರಮ ಪ್ರವೇಶ ಮಾಡಿದರು ಎಂದರೆ ಸರಿಯಲ್ಲ. ಈ ವಿಷಯವನ್ನು ನಾನು ಚಾಸಾ-1ರವರಿಗೆ ತಿಳಿಸಿದ್ದೇ ಎಂದರೆ ಸರಿಯಲ್ಲ. ಈಗ ಸಾಕ್ಷಿದಾರರಿಗೆ ದಿನಾಂಕ 07-07-2020ರ ಹೇಳಿಕೆ ಭಾಗವನ್ನು ಓದಿ ಹೇಳಲಾಗಿ ಸಾಕ್ಷಿದಾರರು ನಿರಾಕರಿಸಿರುತ್ತಾರೆ. ನಿರಾಕರಿಸಿದ ಭಾಗವನ್ನು ನಿಪಿ-2 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿ ಪರವಾಗಿ ವಕೀಲರಿಂದಃ ಇಲ್ಲಾ.**

**ಮರುವಿಚಾರಣೆಃ ಇಲ್ಲಾ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಪ್ರ.ದ.ನ್ಯಾ.ದಂ. ಚಿಂಚೋಳಿ**